ಪ್ರಶ್ನೆ ಸಂಖ್ಯೆ 48 (11) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ)

ಮಾನ್ಯ ಲೋಕೋಪಯೋಗಿ ಹಾಗೂ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಹುಬ್ಬಳ್ಳಿ – ಧಾರವಾಡ ಮಧ್ಯದ ರಸ್ತೆಯನ್ನು ಚತುಷ್ಪಥ ರಸ್ತೆಯಾಗಿ ಅಭಿವೃದ್ಧಿಪಡಿಸುವ ಯೋಜನೆ ಸರ್ಕಾರಕ್ಕಿದೆಯೇ,

ಆ) ಹಾಗಿದ್ದಲ್ಲಿ, ಚತುಷ್ಪಥ ರಸ್ತೆಯನ್ನಾಗಿ ಅಭಿವೃದ್ಧಿಪಡಿಸಲು ಅಂದಾಜು ಎಷ್ಟು ಹಣ ಬೇಕಾಗುತ್ತದೆ, ಈವರೆಗೂ ಎಷ್ಟು ಹಣ ಮಂಜೂರು ಮಾಡಲಾಗಿದೆ, ಇಲ್ಲವಾದಲ್ಲಿ ಕಾರಣಗಳೇನು?

ಶ್ರೀ ಹೆಚ್ ಡಿ ರೇವಣ್ಣ

ಅ) ಹೌದು

ಆ) ಹುಬ್ಬಳ್ಳಿ – ಧಾರವಾಡ ಮಧ್ಯದ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ಅಭಿವೃದ್ಧಿಪಡಿಸಲು ರೂ 100 ಕೋಟಿಗಳ ಅಂದಾಜು ಮೊತ್ತದಲ್ಲಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಕೈಗೊಳ್ಳುವ ಪ್ರಸ್ತಾವನೆಗೆ ವಿವರವಾದ ಯೋಜನಾ ವರದಿಯನ್ನು ತಯಾರಿಸಲು ಸಲಹೆಗಾರರನ್ನು ನೇಮಿಸಲು ಟೆಂಡರ್ ಪ್ರಕ್ರಿಯೆಯಲ್ಲಿದ್ದು, ಈ ರಸ್ತೆಯ ಅಭಿವೃದ್ಧಿಯ ಯೋಜನಾ ವರದಿ ತಯಾರಿಕೆಯ ಹಂತದಲ್ಲಿರುವುದರಿಂದ ಇದುವರೆವಿಗೂ ಯಾವುದೇ ಹಣ ಮಂಜೂರು ಮಾಡಿರುವುದಿಲ್ಲ

ಪ್ರಶ್ನೆ ಸಂಖ್ಯೆ 49 (12) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ)

ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಹುಬ್ಬಳ್ಳಿ – ಧಾರವಾಡ ಮಹಾನಗರದ ಜನತೆಯ ಬಹುದಿನಗಳ ಬೇಡಿಕೆಯಾದ 3ನೇ ಹಂತದ ಕುಡಿಯುವ ನೀರಿನ ಯೋಜನೆಗೆ ಸರ್ಕಾರ

ಅನುಮತಿ ನೀಡಿ ಆಡಳಿತಾತ್ಮಕ ಒಪ್ಪಿಗೆ ನೀಡಿದೆಯೇ, ಇಲ್ಲವಾದಲ್ಲಿ, ಕಾರಣಗಳೇನು

ಆ) 3ನೇ ಹಂತದ ಕುಡಿಯುವ ನೀರಿನ ಯೋಜನೆ ಪ್ರಾರಂಭಿಸಲಿಕ್ಕೆ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿರಲು ಕಾರಣಗಳೇನು,

ಇ) ಕಳೆದ 1 1/2 ವರ್ಷಗಳಿಂದ ಪಾಲಿಕೆಯ ವ್ಯಾಪ್ತಿಯಲ್ಲಿ 6–7 ದಿನಕ್ಕೊಮ್ಮೆ ನೀರು ಸರಬರಾಜು ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ,

ಈ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್ ಡಿ ಕುಮಾರಸ್ವಾಮಿ

ಅ) ಹುಬ್ಬಳ್ಳಿ–ಧಾರವಾಡ ಅವಳಿ ನಗರಗಳಿಗೆ ನೀರು ಸರಬರಾಜು ವ್ಯವಸ್ಥೆ ಉತ್ತಮ ಪಡಿಸಲು ರೂ 195 00 ಕೋಟಿ ಅಂದಾಜು ವೆಚ್ಚದಲ್ಲಿ ಮಲಪ್ರಭಾ ಜಲಾಶಯದಿಂದ 3ನೇ ಹಂತದ ಕುಡಿಯುವ ನೀರಿನ ಯೋಜನೆಯನ್ನು ವರ್ಷಾಸನ ಪಾವತಿ (ANNUITY FUNDS) ಆಧಾರದ ಮೇಲೆ ಕೈಗೊಳ್ಳಲು ಉದ್ದೇಶಿಸಲಾಗಿದೆ

ಈ ಮಧ್ಯೆ ರೂ 195 00 ಕೋಟಿಗಳ ಕಾಮಗಾರಿಯ ಭಾಗವಾದ ವಿತರಣಾ ವ್ಯವಸ್ಥೆ ಸುಧಾರಣೆ ಕಾಮಗಾರಿಗೆ ರೂ 50 25 ಕೋಟಿಗಳ ಅಂದಾಜು ಪಟ್ಟಿಗೆ ಸರ್ಕಾರ ದಿನಾಂಕ 16–03–2006ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿರುತ್ತದೆ ಇದಲ್ಲದೆ ಯು ಐ ಡಿ ಎಸಂ ಎಸ್ ಎಂ ಟಿ ಯೋಜನೆಯಡಿ ರೂ 990 21ಲಕ್ಷಗಳಿಗೆ ದಿನಾಂಕ 16–06–2007ರಲ್ಲಿ ಕೊಳವೆ ಮಾರ್ಗ ನವೀಕರಣ, ಜಲಸಂಗ್ರಹಾಗಾರಗಳು ಮತ್ತು ಇತರ ಕಾಮಗಾರಿಗಳಿಗೆ ಸರ್ಕಾರದ ಅನುಮೋದನೆ ನೀಡಲಾಗಿರುತ್ತದೆ ಮಂಡಳಿಯು ಕಾಮಗಾರಿಯನ್ನು ಕೈಗೊಳ್ಳಲು ಟೆಂಡರ್ ಪ್ರಕ್ರಿಯೆಯನ್ನು ಪ್ರಾರಂಭಿಸಿರುತ್ತಾರೆ

ಆ) ಮೇಲೆ ವಿವರಿಸಿರುವ ಅಭಿವೃದ್ಧಿ ಕೆಲಸಗಳನ್ನು ಬಿಟ್ಟು, ಉಳಿದ ಕೆಲಸಗಳನ್ನು ವರ್ಷಾಸನ ಪಾವತಿ ಆಧಾರದ ಮೇಲೆ ತೆಗೆದುಕೊಳ್ಳುವ ಬಗ್ಗೆ ಸದರಿ ನೀತಿಯು ಸರ್ಕಾರದ ಪರಿಶೀಲನೆಯಲ್ಲಿದೆ ಇದೇ ವೇಳೆಗೆ ಮೇಲೆ

ನಮೂದಿಸಿದಂತೆ ರೂ 50 25 ಕೋಟಿ ಹಾಗೂ ರೂ 9 90 ಕೋಟಿಗಳ ಅನುದಾನದಲ್ಲಿ ವಿವಿಧ ಕಾಮಗಾರಿಗಳನ್ನು ತೆಗೆದುಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ

ಇ) ಕಳೆದ 1 1/2 ವರ್ಷಗಳಿಂದ ಹುಬ್ಬಳ್ಳಿ ಧಾರವಾಡದಲ್ಲಿ 3 – 4 ದಿನಕ್ಕೊಮ್ಮೆ ನೀರು ಸರಬರಾಜು ಮಾಡಲಾಗುತ್ತಿದೆ

ಈ) ವಿಶ್ವಬ್ಯಾಂಕ್ ನೆರವಿನ ಅಡಿಯಲ್ಲಿ ಅಮ್ಮಿನಭಾವಿಯಿಂದ ಹುಬ್ಬಳ್ಳಿಗೆ ನೇರವಾಗಿ ನೀರು ಸರಬರಾಜು ಮಾಡುವ 1168 ಮೀ ಮೀ ವ್ಯಾಸದ ಎಂ ಎಸ್ ಏರು ಕೊಳವೆ ಮಾರ್ಗ ಅಳವಡಿಸುವ ಕಾಮಗಾರಿ ಹಾಗೂ ಅಮ್ಮಿನಭಾವಿಯಲ್ಲಿ 400 ಅಶ್ವಶಕ್ತಿ ಪಂಪ್ ಸೆಟ್ ಅಳವಡಿಸುವ ಕಾಮಗಾರಿಯು ಮುಗಿದಿದ್ದು ಜುಲೈ 2007ರ ಅಂತ್ಯದೊಳಗೆ ಚಾಲನೆಗೊಳಿಸಲಾಗುವುದು ಅಲ್ಲದೇ ವಿಶ್ವ ಬ್ಯಾಂಕ್ ನೆರವಿನ ಅಡಿಯಲ್ಲಿ ಕ್ವಿಕ್ ಫಿಕ್ಸ್ ಯೋಜನೆ ಮಂಜೂರಾಗಿದ್ದು ಯೋಜನೆಯಡಿ ಹುಬ್ಬಳ್ಳಿ ನಗರದಲ್ಲಿ 17 5 ಕಿ ಮೀ ಹಾಗೂ ಧಾರವಾಡ ಶಹರದಲ್ಲಿ 9 00 ಕಿ ಮೀ ಪೂರಕ ಕೊಳವೆ ಮಾರ್ಗಗಳನ್ನು ಅಳವಡಿಸಲು ಅವಕಾಶವಿದ್ದು ಕಾಮಗಾರಿಗಳನ್ನು ಪೂರ್ಣಗೊಳಿಸಿ ಚಾಲನೆಗೊಳಿಸಲಾಗಿದೆ ಮೇಲೆ ನಮೂದಿಸಿದಂತೆ ರೂ 50'25 ಕೋಟಿ ಹಾಗೂ ರೂ 9 90 ಕೋಟಿಗಳ ವೆಚ್ಚದಲ್ಲಿ ವಿವಿಧ ಕಾಮಗಾರಿಗಳನ್ನು ತೆಗೆದು ಕೊಳ್ಳಲು ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲಾಗುವುದು

ಪ್ರಶ್ನೆ ಸಂಖ್ಯೆ 50 (85) ಶ್ರೀ ಐವಾನ್ ನಿಗ್ಲಿ, ಎಂಎಲ್ಎ (ನಾಮಾಂಕಿತ)

ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ) ಬೀದಿ ನಾಯಿಗಳ ಹಾವಳಿಯನ್ನು ತೊಡೆದು ಹಾಕಲು ಸರ್ಕಾರವು ಎದುರಿಸುತ್ತಿರುವ ತೊಂದರೆಗಳೇನು? ಕಳೆದ ಒಂದು ವರ್ಷದಿಂದ ಬೀದಿ ನಾಯಿಗಳು ಕಚ್ಚಿರುವ ಬಗ್ಗೆ ವರದಿಯಾಗಿರುವ ಪ್ರಕರಣಗಳೆಷ್ಟು? ಮತ್ತ ಎಷ್ಟು ಮಂದಿ ಜನ/ಮಕ್ಕಳು ಗಾಯಗೊಂಡಿರುತ್ತಾರೆ ಅಥವಾ ಮರಣ ಹೊಂದಿರುತ್ತಾರೆ ಪರಿಹಾರವನ್ನು ನೀಡಲಾಗಿದೆಯೇ? ಎಷ್ಟು ಹಣವನ್ನು ನೀಡಲಾಗಿದೆ

ಆ) ನಗರದಲ್ಲಿ ಬೀದಿ ನಾಯಿಗಳು ಹೆಚ್ಚಾಗಲು ಕಾರಣಗಳೇನು,